"ELECTION URGENT"

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8,
ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52

**ಆದೇಶ ಸಂಖ್ಯೆ: ರಾಚುಆ:18: ಇಜಿಪಿ: 2018, ದಿನಾಂಕ: 23-05-2018**

ನ್ಯಾಯಾಲಯಗಳಲ್ಲಿ ದಾಖಲಾಗಿದ್ದ ಪ್ರಕರಣಗಳು ಇತ್ಯರ್ಥವಾಗಿರುವ 17 ಗ್ರಾಮ ಪಂಚಾಯಿತಿಗಳಿಗೆ ಹಾಗೂ ಹೊಸದಾಗಿ ರಚಿತವಾಗಿರುವ ಬೆಳಗಾವಿ ಜಿಲ್ಲೆ, ರಾಯಭಾಗ್ ತಾಲ್ಲೂಕಿನ **ಮಂಟೂರ** ಗ್ರಾಮ ಪಂಚಾಯಿತಿಗೆ ಸಾರ್ವತ್ರಿಕ ಚುನಾವಣೆ ಮೂಲಕ ಭರ್ತಿ ಮಾಡಲು ರಾಜ್ಯ ಚುನಾವಣಾ ಆಯೋಗವು **ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 308ಎಎ ಮತ್ತು 308ಎಬಿ ರನ್ವಯ ಚುನಾವಣಾ ವೇಳಾ ಪಟ್ಟಿಯನ್ನು ಈ ಕೆಳಕಂಡಂತೆ ಘೋಷಿಸಿದೆ.**

ಸಾರ್ವತ್ರಿಕ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿಗಳು ಮತ್ತು ಸದಸ್ಯ ಸ್ಥಾನಗಳ ಸಂಖ್ಯೆ ವಿವರಗಳನ್ನು **ಅನುಬಂಧ-1**ರಲ್ಲಿ ತೋರಿಸಲಾಗಿದೆ.

## ಚುನಾವಣಾ ವೇಳಾಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 30-05-2018 (ಬುಧವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 02-06-2018 (ಶನಿವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 04-06-2018 (ಸೋಮವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 06-06-2018 (ಬುಧವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಬೆಳಿಗ್ಗೆ 7-00 ಗಂಟೆಯಿಂದ ಸಂಜೆ 5-00ಗಂಟೆಯವರೆಗೆ) | **14-06-2018 (ಗುರುವಾರ))** |
| 6 | ಮರು ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಬೆಳಿಗ್ಗೆ 7-00 ಗಂಟೆಯಿಂದ ಸಂಜೆ 5-00ಗಂಟೆಯವರೆಗೆ) | 15-06-2018 (ಶುಕ್ರವಾರ) |
| 7 | ಮತಗಳ ಎಣಿಕೆ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಘಂಟೆಯಿಂದ) (ತಾಲ್ಲೂಕು ಕೇಂದ್ರಗಳಲ್ಲಿ) | 17-06-2018 (ಭಾನುವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 17-06-2018 (ಭಾನುವಾರ) |

ಜಿಲ್ಲಾಧಿಕಾರಿಗಳು, ಆಯೋಗವು ಆದೇಶಿಸಿರುವ ಮೇಲ್ಕಂಡ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಯನ್ನು ನಡೆಸುವ) ನಿಯಮಗಳು, 1993ರ ನಿಯಮ 12ರ ಅಡಿಯಲ್ಲಿ ಚುನಾವಣಾ ಅಧಿಸೂಚನೆಯನ್ನು ಹೊರಡಿಸತಕ್ಕದ್ದು ಹಾಗೂ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿಸಿದ ಅಧಿಸೂಚನೆ ಪ್ರತಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಕಛೇರಿಯಲ್ಲಿ ಇರುವ ಸೂಚನಾ ಫಲಕದ ಮೇಲೆ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲೂ ಸಹ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಫ್ಯಾಕ್ಸ್/ ಇ-ಮೇಲ್ ಮುಖಾಂತರ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಅಂದೇ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಚುನಾವಣಾಧಿಕಾರಿಗಳು ಪ್ರಪತ್ರ-3 ರಲ್ಲಿ ಚುನಾವಣಾ ನೋಟೀಸನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಿ, ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು ಹಾಗೂ ಚುನಾವಣಾ ನೋಟೀಸಿನಲ್ಲಿ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿ ಹೆಸರು, ಕ್ಷೇತ್ರದ ಹೆಸರು, ಸದಸ್ಯ ಸ್ಥಾನಗಳ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು.

**ಮೇಲ್ಕಂಡ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಇ.ಸಿ.ಐ.ಎಲ್. ಹೈದರಾಬಾದ್ ರವರು ತಯಾರಿಸಿರುವ ಮಲ್ಟಿಚಾಯ್ಸ್ ವಿದ್ಯುನ್ಮಾನ ಮತ ಯಂತ್ರದ (E.V.M.) ಮೂಲಕ ಚುನಾವಣೆ ನಡೆಸಲು ಆದೇಶಿಸಿದೆ.**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 308ಎಸಿ ರಂತೆ **ಚುನಾವಣಾ ನೀತಿ ಸಂಹಿತೆಯು ಚುನಾವಣೆ ನಡೆಯುವ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ದಿನಾಂಕ: 30-05-2018ರಿಂದ ದಿನಾಂಕ.17-06-2018ರ ವರೆಗೆ ಜಾರಿಯಲ್ಲಿರುತ್ತದೆ.**

ಗ್ರಾಮ ಪಂಚಾಯಿತಿಯ ಯಾವುದೇ ಕ್ಷೇತ್ರದಲ್ಲಿ ನಾಮಪತ್ರ ಸ್ವೀಕೃತವಾಗದೇ ಚುನಾವಣೆ ಪ್ರಕ್ರಿಯೆ ಮುಂದುವರೆಯಲಾಗದೆ ಇರುವಂತಹ ಗ್ರಾಮ ಪಂಚಾಯಿತಿಗಳಲ್ಲಿ ಹಾಗೂ ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತ/ ನಾಮಪತ್ರ ಹಿಂತೆಗೆತ ಇತ್ಯಾದಿ ಕಾರಣಗಳಿಂದ ಯಾವುದೇ ಅಭ್ಯರ್ಥಿಯು ಕಣದಲ್ಲಿರದೆ **ಆ ಗ್ರಾಮ ಪಂಚಾಯಿತಿಯ** ಯಾವುದೇ ಸ್ಥಾನಕ್ಕೂ ಚುನಾವಣೆ ನಡೆಯದೇ ಇದ್ದಲ್ಲಿ ಅಥವಾ ಗ್ರಾಮ ಪಂಚಾಯಿತಿಯಲ್ಲಿನ ಚುನಾವಣೆ ಘೋಷಿಸಿರುವ ಎಲ್ಲಾ ಸ್ಥಾನಗಳೂ ಅವಿರೋಧವಾಗಿ ಆಯ್ಕೆಯಾಗಿದ್ದು, ಆಯ್ಕೆಯಾದ ಅಭ್ಯರ್ಥಿಯ ಫಲಿತಾಂಶವನ್ನು ಚುನಾವಣಾಧಿಕಾರಿಯು ಘೋಷಿಸಿದ್ದಲ್ಲಿ, ಅಂತಹ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನೀತಿಸಂಹಿತೆ ಜಾರಿಯಲ್ಲಿರುವುದು ತಕ್ಷಣದಿಂದ ನಿಂತುಹೋಗುತ್ತದೆ.

ಗ್ರಾಮ ಪಂಚಾಯಿತಿಯ ಯಾವುದೇ ಕ್ಷೇತ್ರದ ಸ್ಥಾನಕ್ಕೆ ಚುನಾವಣೆ ನಡೆಯುತ್ತಿದ್ದಲ್ಲಿ ಅಂತಹ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮೇಲೆ ತಿಳಿಸಿರುವ ಅವಧಿಯವರೆಗೆ ನೀತಿಸಂಹಿತೆಯು ಜಾರಿಯಲ್ಲಿರುತ್ತದೆ.

ಚುನಾವಣೆ ಕಾಲದಲ್ಲಿ ಭ್ರಷ್ಟಾಚಾರಗಳನ್ನು ತಡೆಗಟ್ಟುವ ಬಗ್ಗೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವುದು.

1. ಚುನಾವಣಾಧಿಕಾರಿಗಳು (ಆರ್.ಓ) ಚುನಾವಣೆ ನಡೆಯುವ ಪ್ರತಿಯೊಂದು ಮತಗಟ್ಟೆಯಲ್ಲಿ ಚುನಾವಣಾ ಪ್ರಕ್ರಿಯೆಗಳ ವಿಡಿಯೋಗ್ರಾಫಿಕ್ ಚಿತ್ರೀಕರಣ ಮಾಡಿಸುವುದು.
2. ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ನೀತಿ ಸಂಹಿತೆಯು ಜಾರಿಯಲ್ಲಿರುವ ಪ್ರದೇಶಗಳಲ್ಲಿರುವ ಎಲ್ಲಾ ಮದ್ಯದ ಅಂಗಡಿಗಳನ್ನು ಮತ್ತು ಮದ್ಯ ತಯಾರಿಕಾ ಘಟಕಗಳನ್ನು ಅದರ ಮಾಲೀಕರು, ಅಧಿಭೋಗದಾರರು ಮತ್ತು ಸಂದರ್ಭಾನುಸಾರ ವ್ಯವಸ್ಥಾಪಕರು ಮುಚ್ಚತಕ್ಕದ್ದು ಹಾಗೂ ಮೊಹರು ಮಾಡಿ ಅದರ ಕೀಯನ್ನು ಜಿಲ್ಲಾಧಿಕಾರಿಗಳಿಗೆ ಅಥವಾ ಅಧಿಕಾರ ವ್ಯಾಪ್ತಿಯುಳ್ಳ ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟರಿಗೆ ಒಪ್ಪಿಸತಕ್ಕದ್ದು.
3. ನೀತಿಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ಯಾರಾದರೂ ಮದ್ಯವನ್ನು ಸ್ವಾದೀನದಲ್ಲಿಟ್ಟುಕೊಂಡಿರುವುದು ಅಥವಾ ಮದ್ಯವನ್ನು ಸೇವಿಸಿ ಬೀದಿಯಲ್ಲಿ ರಂಪಾಟ ಮಾಡುತ್ತಿರುವುದು ಕಂಡು ಬಂದರೆ ಮುನ್ನೆಚ್ಚರಿಕೆ ಕ್ರಮವಾಗಿ ಚುನಾವಣೆ ಮುಕ್ತಾಯವಾಗುವವರೆಗೆ ಅಂತಹವರನ್ನು ಕಸ್ಟಡಿಯಲ್ಲಿ ಇಡತಕ್ಕದ್ದು.
4. ಮೇಲ್ಕಂಡ ಪ್ರಕರಣದಂತೆ ಚುನಾವಣೆ ಕಾಲದಲ್ಲಿ ಭ್ರಷ್ಟಾಚಾರಗಳನ್ನು ತಡೆಗಟ್ಟುವ ಬಗ್ಗೆ ಸೂಕ್ತ ತಂಡವನ್ನು ರಚಿಸಿ ಕ್ರಮಗಳನ್ನು ಕೈಗೊಳ್ಳುವುದು.

**<u>ವಿಶೇಷ ಸೂಚನೆ :</u>**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ, ಚುನಾವಣೆ ನಡೆಯಲಿರುವ ಗ್ರಾಮ ಪಂಚಾಯತಿಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು

ಅಳವಡಿಸಿಕೊಂಡು ತಯಾರಿಸಲಾಗಿರುವ ಗ್ರಾಮ ಪಂಚಾಯತಿಯ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.

2. ಚುನಾವಣೆ ನಡೆಸಲಾಗುವ ಗ್ರಾಮ ಪಂಚಾಯಿತಿಗೆ ಚುನಾವಣಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಕ ಮಾಡಿ ಅವರಿಗೆ ತರಬೇತಿಯನ್ನು ಹಾಗೂ ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ ಹಾಗೂ ಸುತ್ತೋಲೆ/ ನಿರ್ದೇಶನ ಪತ್ರಗಳ ಪ್ರತಿಯನ್ನು ನೀಡುವುದು.

3. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ **ಆದೇಶ ಸಂಖ್ಯೆ:ಎಸ್‌ಇಸಿ:10:ಎಂಐಎಸ್‌ಸಿ:2016 ದಿ.29.06.2016 ಹಾಗೂ ತಿದ್ದುಪಡಿ ದಿ.06.07.2016** ರಂತೆ ಕ್ರಮವಹಿಸುವುದು.

4. ಚುನಾವಣೆ ನಡೆಸಲಾಗುತ್ತಿರುವ ಗ್ರಾಮ ಪಂಚಾಯಿತಿ ಸ್ಥಾನಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ಸ್ಥಳೀಯ ಪತ್ರಿಕೆಗಳಲ್ಲಿ ಸುದ್ದಿಯಾಗಿ (ವೆಚ್ಚ ಬಾರದಂತೆ) ಪ್ರಕಟಿಸಲು ಸೂಕ್ತ ಕ್ರಮ ತೆಗೆದುಕೊಳ್ಳುವುದು.

5. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.

6. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ ರಾಚುಆ:248: ಇಜಿಪಿ:2015, ದಿ.19.03.2015 ರಂತೆ ಗ್ರಾಮ ಪಂಚಾಯಿತಿ ಚುನಾವಣೆಗಳ **ಮತಪತ್ರದಲ್ಲಿ "NOTA" ಅವಕಾಶ ಇರುವುದಿಲ್ಲ.**

ಆದೇಶಾನುಸಾರ

(ಎಂ.ಪಿ.ರಂಜಿತಾ)
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ

ಗೆ,
ಜಿಲ್ಲಾಧಿಕಾರಿಗಳು,
ಕಲಬುರಗಿ, ವಿಜಯಪುರ ಮತ್ತು ಬೆಳಗಾವಿ ಜಿಲ್ಲೆ.

## ಅನುಬಂಧ–1

(ರಾಚುಆ:18:ಇಚಿಪಿ:2018 ದಿ.23.05.2018ಕ್ಕೆ ಲಗತ್ತಿಸಲಾದುದು)

### ಸಾರ್ವತ್ರಿಕ ಚುನಾವಣೆ ನಡೆಯುತ್ತಿರುವ ಗ್ರಾಮ ಪಂಚಾಯಿತಿಗಳ ವಿವರ:

| ಕ್ರ.ಸಂ | ಜಿಲ್ಲೆ | ತಾಲ್ಲೂಕು | ಗ್ರಾಮ ಪಂಚಾಯಿತಿ ಹೆಸರು | ಸದಸ್ಯ ಸ್ಥಾನಗಳ ಸಂಖ್ಯೆ: |
|---|---|---|---|---|
| 1 | ಕಲಬುರಗಿ | ಕಲಬುರಗಿ | ಮರಗುತ್ತಿ | 18 |
| 2 | ಕಲಬುರಗಿ | ಆಳಂದ | ಮಡಕಿ | 14 |
| 3 | ಕಲಬುರಗಿ | ಆಳಂದ | ದಣ್ಣೂರ | 12 |
| 4 | ಕಲಬುರಗಿ | ಆಳಂದ | ನಿರಗುಡಿ | 23 |
| 5 | ಕಲಬುರಗಿ | ಆಳಂದ | ಭೂಸನೂರ | 15 |
| 6 | ಕಲಬುರಗಿ | ಆಳಂದ | ಹಿತ್ತಲಶಿರೂರ | 17 |
| 7 | ಕಲಬುರಗಿ | ಆಳಂದ | ಧುತ್ತರಗಾಂವ | 21 |
| 8 | ಕಲಬುರಗಿ | ಚಿಂಚೋಳಿ | ಕರ್ಚಖೇಡ | 13 |
| 9 | ಕಲಬುರಗಿ | ಚಿಂಚೋಳಿ | ಗರಗಪಳ್ಳಿ | 16 |
| 10 | ಕಲಬುರಗಿ | ಚಿತ್ತಾಪೂರ | ಶಳ್ಳಗಿ | 9 |
| 11 | ಕಲಬುರಗಿ | ಚಿತ್ತಾಪೂರ | ಕೊಲ್ಲೂರ | 15 |
| 12 | ಕಲಬುರಗಿ | ಚಿತ್ತಾಪೂರ | ರಾಂಪುರಹಳ್ಳಿ | 11 |
| 13 | ಕಲಬುರಗಿ | ಜೇವರ್ಗಿ | ಮದರಿ | 14 |
| 14 | ಕಲಬುರಗಿ | ಜೇವರ್ಗಿ | ಕರಕಿಹಳ್ಳಿ | 17 |
| 15 | ಕಲಬುರಗಿ | ಜೇವರ್ಗಿ | ರಂಜಣಗಿ | 21 |
| 16 | ವಿಜಯಪುರ | ಮುದ್ದೇಬಿಹಾಳ | ಯಲಗೂರ | 15 |
| 17 | ವಿಜಯಪುರ | ಮುದ್ದೇಬಿಹಾಳ | ಬಳಬಟ್ಟಿ | 11 |
| 18 | ಬೆಳಗಾವಿ | ರಾಯಭಾಗ್ | ಮಂಟೂರ | 10 |
| | ಒಟ್ಟು | | | **272** |

(ಎಂ.ಪಿ.ರಂಜಿತಾ)
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ